ಕರ್ನಾಟಕ ಸರ್ಕಾರ ಸಿ ಆರ್ ಪಿ ಸಿ 67

ಹೇಳಿಕೆ ಹಾಳೆ

(ಆರ್.ಪಿ.ಸಂಖ್ಯೆ **57**)

ನಮೂನೆ ಸಂಖ್ಯೆ 4

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸಿಂಧನೂರು.**

**ಸಿ.ಸಿ.ನಂ.1684/2022**

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ಪ್ರಭಾಕರ್** | | |
| **ತಂದೆ:ಹೆಸರು** | **ಗೋಪಾಲಕೃಷ್ಣ** | **ಪಿಡಬ್ಲ್ಯೂ:** | **9** |
| **ವಯಸ್ಸು** | **65 ವರ್ಷ** | **ಸಿಡಬ್ಲ್ಯೂ:** | **8** |
| **ಉದ್ಯೋಗ:** | **ವ್ಯವಸಾಯ** | | |
| **ವಾಸ ಸ್ಥಳ:** | **ಸಾಗರಕ್ಯಾಂಪ್.** | | |

**ದಿನಾಂಕ 26-02-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ. ರವರಿಂದ::**

ಸಾಕ್ಷಿಗೆ ನಿಪಿ-21 ಪಂಚನಾಮೆಯನ್ನು ತೋರಿಸಲಾಗಿ, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-21 ಬಿ ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ-6 ರಲ್ಲಿರುವ ತಮ್ಮನ್ನು ನೋಡಿ ಗುರುತಿಸಿರುತ್ತಾರೆ. ಸುಮಾರು 4 ವರ್ಷಗಳ ಹಿಂದೆ ವೆಂಕಟೇಶ್ವರ ರವರ ಮನೆಯಲ್ಲಿ ಕಳ್ಳತನವಾಗಿದ್ದ ಬಗ್ಗೆ ಗೊತ್ತಿತ್ತು. ನಿಪಿ-21 ಕ್ಕೆ ಸಹಿಯನ್ನು ಏತಕ್ಕಾಗಿ ಮಾಡಿದೆ ಎಂಬುದು ನನಗೆ ಗೊತ್ತಿಲ್ಲ. ನಿಪಿ-21 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲು:: ಮಾನ್ಯ ಸ ಸ ಅ ರವರಿಂದ:**

ದಿ:19-01-2022 ರಂದು ಮ. 3 ರಿಂದ 4 ಗಂಟೆಯವರೆಗೆ ಚಾಸಾ-1 ರವರ ಮನೆಯಲ್ಲಿ ನಿಮ್ಮ & ಚಾಸಾ-9 ರವರ ಸಮಕ್ಷಮ 2 ನೇ ಆರೋಪಿ ತೋರಿಸಿದ ಕೃತ್ಯದ ಸ್ಥಳದಲ್ಲಿ ನಿಪಿ-21 ರಂತೆ ಸ್ಥಳ ಪಂಚನಾಮೆ ಮಾಡಿ, ನಿಪಿ-6 ನ್ನ ತೆಗೆದಿದ್ದರು ಎಂದರೆ ಸರಿಯಲ್ಲ.

ನಿಪಿ-21 ರಲ್ಲಿರುವ ಸಂಗತಿಗಳ ಬಗ್ಗೆ & 2 ನೇ ಆರೋಪಿಯ ಬಗ್ಗೆ ನನಗೆ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲು: ಆರೋಪಿ ಪರ ವಕೀಲರಿಂದ: ಇಲ್ಲ.**

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಸಿಂಧನೂರು.**